Akashvani : Bangalore
Regional Bulletin In Kannada
21.10.2025 / 6.40 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದಲ್ಲಿ ಪರಿಶಿಷ್ಟರ ಸಂರಕ್ಷಣೆಗೆ ಪೊಲೀಸ್ ಠಾಣೆ ಕಾರ್ಯೋನ್ಮುಖ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಮಕ್ಕಳ ಮೇಲಿನ ದೌರ್ಜನ್ಯದ ವಿರುದ್ಧ ಕಠಿಣ ಕ್ರಮಕ್ಕೆ ಶಾಸನ ರಚನೆ - ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್
- ನಾಡಿದ್ದು ಕಿತ್ತೂರು ಉತ್ಸವ; ವ್ಯಾಪಕ ಸಿದ್ಧತೆ
- ಕರಾವಳಿಯಲ್ಲಿ ಭಾರೀ ಗಾಳಿ, ಮಳೆ ಸಾಧ್ಯತೆ; ಇದೇ ಶನಿವಾರದವರೆಗೆ ಸಮುದ್ರಕ್ಕಿಳಿಯದಂತೆ ಮೀನುಗಾರರಿಗೆ ಮುನ್ಸೂಚನೆ

><><><><><

ರಾಜ್ಯದಲ್ಲಿ ಪರಿಶಿಷ್ಟರ ಸಂರಕ್ಷಣೆಗೆ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸ್ ಠಾಣೆ ಕಾರ್ಯೋನ್ಮುಖಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರು ಪೊಲೀಸ್ ಸಂಸ್ಮರಣಾ ದಿನದ ಅಂಗವಾಗಿ ಬೆಂಗಳೂರಿನಲ್ಲಿಂದುನಗರ ಸಶಸ್ತ್ರ ಮೀಸಲು ಪಡೆ ಕೇಂದ್ರ ಕಚೇರಿಯಲ್ಲಿ ಪೊಲೀಸ್ ಹುತಾತ್ಮರಿಗೆ ಗೌರವ ನಮನ ಸಲ್ಲಿಸಿ ಮಾತನಾಡಿದರು. ಈ ಪೊಲೀಸ್ ಠಾಣೆಗಳು ಪರಿಣಾಮಕಾರಿಯಾಗಿ ಕೆಲಸ ಮಾಡುವ ಮೂಲಕ ಸಂವಿಧಾನ ಹಕ್ಕು ಮತ್ತು

ಮೌಲ್ಯಗಳನ್ನು ಕಾಪಾಡುವ ಕಾರ್ಯ ಆಗಬೇಕಿದೆ ಎಂದರು. ಒಂದು ವರ್ಷದಲ್ಲಿ ರಾಜ್ಯದ ೮ ಮಂದಿ ಸೇರಿದಂತೆ ಒಟ್ಟು ೧೯೧ ಮಂದಿ ಪೊಲೀಸ್ ಸಿಬ್ಬಂದಿ ಹುತಾತ್ಮರಾಗಿದ್ದಾರೆ. ಇವರ ತ್ಯಾಗ ಬಲಿದಾನಕ್ಕೆ ಬೆಲೆಕಟ್ಟಲಾಗದು.ಪೊಲೀಸ್ ಇಲಾಖೆ ಶಾಂತಿ, ಸುವ್ಯವಸ್ಥೆ ಕಾಪಾಡಿದರೆ ರಾಜ್ಯದ ಅಭಿವೃದ್ಧಿ ಸಾಧ್ಯವಾಗುತ್ತದೆ. ಪೊಲೀಸ್ ಇಲಾಖೆಯ ಉತ್ತಮ ಕಾರ್ಯದಿಂದಾಗಿ ಮಾದಕವಸ್ತು ಹಾವಳಿಗೂ ತಡೆಬಿದ್ದಿದೆ. ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಬೇಕಿದೆ ಎಂದರು. ಸರ್ಕಾರ ಪೊಲೀಸ್ ಸಂತ್ರಸ್ತ ಕುಟುಂಬಗಳ ೧೧೭ ಮಂದಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗಾವಕಾಶಕ್ಕಾಗಿ ಆದೇಶ ನೀಡಲಾಗಿದೆ. ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

><><><><><

ಪೊಲೀಸ್ ಸಂಸ್ಮರಣಾ ದಿನದ ಸಂದರ್ಭದಲ್ಲಿಂದು ಹುತಾತ್ಮ ಪೊಲೀಸರಿಗೆ ನಾಡಿನಾದ್ಯಂತ ಗೌರವ ನಮನ ಸಲ್ಲಿಸಲಾಯಿತು. ಸಮಾಜದ ಭದ್ರತೆ ಹಾಗೂ ಸುರಕ್ಷತೆಗಾಗಿ ಹಗಲಿರುಳು ಧೈರ್ಯ ಸಾಹಸ ಹಾಗೂ ಕರ್ತವ್ಯಕ್ಕೆ ಕಟಿಬದ್ಧರಾಗಿ ಜೀವದ ಹಂಗು ತೊರೆದು ಕಾರ್ಯ ನಿರ್ವಹಿಸುತ್ತಿರುವ ಪೊಲೀಸ ಕಾರ್ಯ ಅನನ್ಯವಾಗಿದೆ ಎಂದು ವಿಜಯಪುರ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಹರೀಶ ಎ ಹೇಳಿದರು. ವಿಜಯಪುರ ಜಿಲ್ಲಾ ಪೊಲೀಸ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪೊಲೀಸ್ ಸ್ಮಾರಕಕ್ಕೆ ಪುಷ್ಪಗುಚ್ಛವಿರಿಸಿ, ಗೌರವ ನಮನ ಸಲ್ಲಿಸಿ, ಮಾತನಾಡಿದ ಅವರು, ಜನರ ಸಂದಿಗ್ಧ ಹಾಗೂ ಕಷ್ಟಕಾಲದ ಪರಿಸ್ಥಿತಿಯಲ್ಲಿ ಜನರಿಗೆ ಸಹಾಯವಾಗುವ ನಿಟ್ಟಿನಲ್ಲಿ ಪೊಲೀಸರು ಕಾರ್ಯ ನಿರ್ವಹಿಸುತ್ತಾರೆ. ಅವರಿಗೆ ಸಹಕಾರ ನೀಡುವ ಮೂಲಕ ಕಾನೂನು ಸುವ್ಯವಸ್ಥೆ ಕಾಪಾಡುವ ಪೊಲೀಸರ ಕೈ ಬಲಪಡಿಸಬೇಕು ಎಂದು

ಹೇಳಿದರು. ಜನರಿಗೆ ಅಗತ್ಯ ರಕ್ಷಣೆ ನೀಡುವಲ್ಲಿ ಪೊಲೀಸ್ ಕೊಡುಗೆ ಅಪಾರವಾಗಿದೆ ಎಂದು ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಹೇಳಿದರು. ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಪೊಲೀಸ್ ಕರ್ತವ್ಯ ನಿಷ್ಠೆಗೆ ಅವರ ಕುಟುಂಬ ಸದಸ್ಯರ ಸಹಕಾರ ಕೂಡ ಸಾಕಷ್ಟಿದೆ. ಹುತಾತ್ಮರಾದ ಪೊಲೀಸರ ಕುಟುಂಬಗಳಿಗೆ ನಾವೆಲ್ಲರೂ ಆತ್ಮಸ್ಥೈರ್ಯ ತುಂಬಬೇಕಾಗಿದೆ ಎಂದು ಹೇಳಿದರು. ಹುತಾತ್ಮರಾದ ಪೋಲಿಸರಿಗೆ ಗೌರವ ಸಮರ್ಪಣೆಗಾಗಿ ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ ಮೌನ ಆಚರಿಸಲಾಯಿತು. ಕೊಪ್ಪಳ ಜಿಲ್ಲೆಯಲ್ಲಿ ಕರ್ತವ್ಯದ ವೇಳೆ ಇತ್ತೀಚೆಗೆ ನಿಧನರಾದ ಪೊಲೀಸ್ ಕುಟುಂಬದ ಸದಸ್ಯರನ್ನು ಗೌರವಿಸಲಾಯಿತು. ಹಾಸನ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರ್ ಮಾತನಾಡಿ, ಪೊಲೀಸರು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆಗಾಗಿ ಶ್ರಮಿಸುತ್ತಾರೆ ಅವರ ಸೇವೆ ಅಮೂಲ್ಯ. ಯಾವುದೇ ಕ್ಷಣದಲ್ಲಿಯೂ ಅವರು ಕುಗ್ಗಬಾರದು ಎಂದು ಹೇಳಿದರು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ, ಪೊಲೀಸ್ ಹೆಚ್ಚುವರಿ ಅಧೀಕ್ಷಕ ವೆಂಕಟೇಶ್ ನಾಯ್ಡು ಸೇರಿದಂತೆ ಅಧಿಕಾರಿಗಳು, ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಬೆಳಗಾವಿಯ ಪೊಲೀಸ್ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ತಮ್ಮ ವೈಯಕ್ತಿಕ ಬದುಕು ಬದಿಗಿಟ್ಟು, ಕಾನೂನು ಸುವ್ಯವಸ್ಥೆ ಕಾಪಾಡುವ ಪೊಲೀಸರ ಸೇವೆ ಅಪ್ರತಿಮ ಎಂದರು. ಶಿವಮೊಗ್ಗದ ಪೊಲೀಸ್ ಕವಾಯತು ಮೈದಾನದಲ್ಲಿ ಏರ್ಪಡಿಸಲಾಗಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಂಜುನಾಥ

ನಾಯಕ್, ಹುತಾತ್ಮರ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿದರು. ಸದಾ ಸನ್ನದ್ಧರಾಗಿದ್ದು, ಕಾರ್ಯ ನಿರ್ವಹಿಸುವ ಪೊಲೀಸರ ಸೇವೆ ಅಭಿನಂದನೀಯ ಎಂದರು.

><><><><

ದೇಶದೊಳಗಿನ ಸಮಾಜದ ಸ್ವಾಸ್ಥ್ಯ ಕಾಪಾಡಲು ಪೊಲೀಸ್ ಇಲಾಖೆ ನಿರಂತರವಾಗಿ ಸೇವೆ ಸಲ್ಲಿಸುತ್ತಿದೆ. ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸರಷ್ಟೇ ಅಲ್ಲ, ಸಾರ್ವಜನಿಕರು ಕಾನೂನು ಪಾಲನೆ ಮಾಡುವ ಮೂಲಕ ಸಹಕಾರ ನೀಡಬೇಕಾಗುತ್ತದೆ ಎಂದು ಹುಬ್ಬಳ್ಳಿಯ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪಲ್ಲವಿ ಬಿ. ಆರ್. ಹೇಳಿದ್ದಾರೆ. ಪೊಲೀಸ್ ಆಯುಕ್ತಾಲಯ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪೊಲೀಸ್ ಹುತಾತ್ಮರ ಸ್ಮಾರಕಕ್ಕೆ ಪುಷ್ಪಾಗುಚ್ಛ ಸಮರ್ಪಿಸಿ, ಅವರು ಮಾತನಾಡಿದರು, ಸಮಾಜದಲ್ಲಿ ಶಾಂತಿ ನೆಲೆಸಲು ಪೊಲೀಸ್ ಇಲಾಖೆ ಕಾರಣವಾಗಿದ್ದು, ಪೊಲೀಸ್ ಇಲಾಖೆಗೆ ಅಭಿನಂದನೆ ಸಲ್ಲಿಸಬೇಕಾಗುತ್ತದೆ ಎಂದರು.

><><><><

ಬಿಜೆಪಿ- ಜೆಡಿಎಸ್ ಪಕ್ಷಗಳ ಎರಡು ಸಮನ್ವಯ ಸಮಿತಿ ರಚಿಸಲು ಯೋಜಿಸಿದ್ದು, ಪಕ್ಷದ ಮುಖಂಡರ ಜೊತೆ ಚರ್ಚಿಸಿದ ಬಳಿಕ ಸಮಿತಿ ಪ್ರಕಟಿಸಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ ವಿಜಯೇಂದ್ರ ತಿಳಿಸಿದ್ದಾರೆ. ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ, ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಅವರನ್ನು ಇಂದು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ ಅವರು, ೮-೧೦ ದಿನಗಳಲ್ಲಿ ಹೆಸರುಗಳನ್ನು ಕಳುಹಿಸುವುದಾಗಿ ಕುಮಾರಸ್ವಾಮಿಯವರು ತಿಳಿಸಿದ್ದಾರೆ ಎಂದರು. ರಾಜ್ಯ ಸರ್ಕಾರ, ಉದ್ಯಮಿಗಳಾದ ಮೋಹನ್‌ದಾಸ್ ಪೈ, ಕಿರಣ್ ಮಜುಂದಾರ್ ಷಾ ಅವರಂಥ ಹಿರಿಯರು

ಬೆಂಗಳೂರಿನ ಬಗ್ಗೆ ಮತ್ತು ರಸ್ತೆಗಳ ಕುರಿತು ಸಲಹೆ ನೀಡಿದರೆ, ಆ ಸಲಹೆಗಳನ್ನು ಕಿವಿಗೆ ಹಾಕಿಕೊಳ್ಳುತ್ತಿಲ್ಲ. ಇದು ರಾಜ್ಯ ಸರಕಾರಕ್ಕೆ ಶೋಭೆ ತರುವುದಿಲ್ಲ ಎಂದು ವಿಜಯೇಂದ್ರ ಅವರು ಆಕ್ಷೇಪಿಸಿದರು.

><><><><

ಮಕ್ಕಳ ಮೇಲೆ ದೌರ್ಜನ್ಯ ಎಸಗುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಹೊಸ ಶಾಸನ ಜಾರಿಗೆ ತರಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಅವರು ಬೆಳಗಾವಿಯಲ್ಲಿಂದು ಚಿತ್ರದುರ್ಗ ಜಿಲ್ಲೆ ಚಳ್ಳಕೆರೆಯಲ್ಲಿ ಶಿಕ್ಷಕರೊಬ್ಬರು ವಿದ್ಯಾರ್ಥಿ ಮೇಲೆ ನಡೆಸಿದರೆನ್ನಲಾದ ಹಲ್ಲೆಯ ಕುರಿತು ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿ, ದೌರ್ಜನ್ಯ ಯಾರೇ ಎಸಗಿದರೂ ಸಹಿಸಲಾಗದು, ಎಲ್ಲ ಮಾಹಿತಿ ಸಂಗ್ರಹಿಸಿ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಮಕ್ಕಳ ಆಯೋಗದಿಂದ ಎಫ್ಐಆರ್ ದಾಖಲಿಸಲಾಗುವುದು. ಇಂತಹ ಘಟನೆ ಮರುಕಳಿಸದಂತೆ ಕಠಿಣ ಕ್ರಮ ಕೈಗೊಳ್ಳಲು ಚಳಿಗಾಲದ ಅಧಿವೇಶನದಲ್ಲಿ ಶಾಸನ ರಚನೆಗೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗುವುದು ಎಂದು ಹೇಳಿದರು.

><><><><

ನಾಡಿದ್ದು ಆರಂಭವಾಗಲಿರುವ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ತಿಳಿಸಿದ್ದಾರೆ. ಕಿತ್ತೂರಿನಲ್ಲಿಂದು ಉತ್ಸವದ ಪೂರ್ವಸಿದ್ಧತೆಯ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ಸವದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಭವ್ಯ ಮೆರವಣಿಗೆ,

ವಿವಿಧ ಬಗೆಯ ಕ್ರೀಡೆ ಹಾಗೂ  ವಿಚಾರ ಸಂಕಿರಣ, ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದರು.

***ಧ್ವನಿ*** ಮೊಹಮ್ಮದ ರೋಷನ್ (೩೩ ಸೇಕೆಂಡ್)

ಕಿತ್ತೂರು ಉತ್ಸವದ ನಿಮಿತ್ತ ಬೆಂಗಳೂರಿನಿಂದ ಬಿಳ್ಕೊಡಲಾದ ವೀರಜ್ಯೋತಿಯನ್ನು ನಿನ್ನೆ ಸಂಜೆ ಬೆಳಗಾವಿಯಲ್ಲಿ ಬರಮಾಡಿಕೊಳ್ಳಲಾಗಿದೆ. ಇಂದು ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಸಂಚರಿಸಿ ಬೈಲಹೊಂಗಲ ತಲುಪಿದೆ. ನಾಡಿದ್ದು ೨೩ರಂದು ಮುಂಜಾನೆ ಕಿತ್ತೂರು ತಲುಪಲಿದ್ದು, ಅಂದು ವಿಜೃಂಭನೆಯಿಂದ ಬರಮಾಡಿಕೊಳ್ಳಲಾಗುವುದು. ಗದಗ ಜಿಲ್ಲೆಯ ಎಲ್ಲಾ ತಾಲೂಕು, ಗ್ರಾಮ ಪಂಚಾಯತ್‌ಗಳಲ್ಲಿ ಹಾಗೂ ಶಾಲಾ - ಕಾಲೇಜುಗಳಲ್ಲಿ  ನಾಡಿದ್ದು ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ತಿಳಿಸಿದ್ದಾರೆ.

><><><><

ಹಾಸನಾಂಬೆ ವಾರ್ಷಿಕ ಸಾರ್ವಜನಿಕ ದರ್ಶನ ಅವಧಿ ನಾಳೆಗೆ ಮುಕ್ತಾಯಗೊಳ್ಳಲಿದೆ. ಇಂದು ಸರದಿ ಸಾಲಿನ ಪ್ರವೇಶ ದ್ವಾರಗಳು ರಾತ್ರಿ ೯ ಗಂಟೆಗೆ ಮುಚ್ಚಲ್ಪಡುತ್ತವೆ ಮತ್ತು ದರ್ಶನ ಮಧ್ಯರಾತ್ರಿ ೧೨ ಗಂಟೆಗೆ ನಿಲ್ಲುತ್ತದೆ. ನಾಳೆ ದರ್ಶನ ಬೆಳಗ್ಗೆ ೫ ಗಂಟೆಯಿಂದ  ಆರಂಭವಾಗಿ ಸಂಜೆ ೭ ಗಂಟೆಗೆ ಮುಗಿಯುತ್ತದೆ. ನಂತರ ಸಾರ್ವಜನಿಕ ದರ್ಶನಕ್ಕೆ ಅವಕಾಶವಿರುವುದಿಲ್ಲ.

><><><><

ಚಿಕ್ಕಮಗಳೂರು ಜಿಲ್ಲೆಯ ಪ್ರಸಿದ್ಧ ಬಿಂಡಿಗಾ ದೇವಿರಮ್ಮ ದೇವಾಲಯದಲ್ಲಿ ದೀಪಾವಳಿಯ ೩ನೇ ದಿನದ ವಿಶೇಷ ಪೂಜೆ ಹಾಗು ಬಾಗಿಲು ತೆರೆಯುವ ಕಾರ್ಯಕ್ರಮ ಇಂದು ನಡೆಯಿತು. ಚಿಕ್ಕಮಗಳೂರು ಜಿಲ್ಲೆ ಹಾಗು ಹೊರ ಜಿಲ್ಲೆಗಳ ಸಾವಿರಾರು ಶ್ರದ್ಧಾಳುಗಳು ದೇವಾಲಯಕ್ಕೆ

ಆಗಮಿಸಿ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ನಾಳೆ ಮತ್ತು ನಾಡಿದ್ದು ದೇವಾಲಯದಲ್ಲಿ ದೀಪಾವಳಿಯ ವಿಶೇಷ ಪೂಜೆ, ಮಹಾಗಣಪತಿ ಪೂಜೆ, ಕೆಂಡಾರ್ಚನೆ ಕಾರ್ಯಕ್ರಮಗಳು ನಡೆಯಲಿವೆ ಎಂದು ದೇವಾಲಯ ಆಡಳಿತ ಮಂಡಳಿ ತಿಳಿಸಿದೆ.

><><><><

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಮಳೆ ಸಕ್ರಿಯವಾಗಿತ್ತು. ಉತ್ತರ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿಯ ಬಹುತೇಕ ಸ್ಥಳಗಳಲ್ಲಿ ಹಾಗೂ ದಕ್ಷಿಣ ಒಳನಾಡಿ ಹಲವೆಡೆ ಇಂದು ಮಳೆಯಾಗಿದೆ. ಪುತ್ತೂರು, ಸುಳ್ಯದಲ್ಲಿ ತಲಾ ೬ ಸೆಂಟಿಮೀಟರ್, ಬೆಳ್ತಂಗಡಿ, ತಿಪಟೂರಿನಲ್ಲಿ ತಲಾ ೫ ಸೆಂಟಿಮೀಟರ್ ಮಳೆಯಾಗಿದೆ. ಬರುವ ಶನಿವಾರದವರೆಗೂ ರಾಜ್ಯದ ಕರಾವಳಿಯ ಉದ್ದಕ್ಕೂ ತಾಸಿಗೆ ೩೫ ರಿಂದ ೪೫ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಮೀನುಗಾರರು ಸಮುದ್ರಕ್ಕಿಳಿಯದಂತೆ ಸೂಚಿಸಲಾಗಿದೆ. ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ ೨೪ ಗಂಟೆ ಕಾಲ ಮೋಡಕವಿದ ವಾತಾವರಣ ಇರಲಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

><><>END<><><